# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2007ರ ಪರಿಷ್ಕೃತ ವೇತನ ಶ್ರೇಣಿಗಳನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳು ಹಾಗೂ ರಾಜ್ಯ ವೇತನ ಶ್ರೇಣಿಯಲ್ಲಿರುವ ವಿಶ್ವವಿದ್ಯಾಲಯದ ಬೋಧಕೇತರ ಸಿಬ್ಬಂದಿಗೆ ವಿಸ್ತರಿಸುವ ಬಗ್ಗೆ.

ಓದಲಾಗಿದೆ: (1) ಆದೇಶ ಸಂಖ್ಯೆ:ಎಫ್‌ಡಿ 8 ಎಸ್‌ಆರ್‌ಪಿ 2007, ದಿನಾಂಕ: 16-05-2007.

(2) ಅಧಿಸೂಚನೆ ಸಂಖ್ಯೆ:ಎಫ್‌ಡಿ 17 ಎಸ್‌ಆರ್‌ಪಿ 2007, ದಿನಾಂಕ: 16-05-2007.

-----

**ಪ್ರಸ್ತಾವನೆ:**

2007ನೇ ಪರಿಷ್ಕೃತ ವೇತನ ಶ್ರೇಣಿಗಳನ್ನು ಈ ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ಸರ್ಕಾರಿ ನೌಕರರಿಗೆ ಮಂಜೂರು ಮಾಡಲಾಗಿದ್ದು ಆದೇಶದ ಕಂಡಿಕೆ:11.1ರ ಅಡಿ ಈ ಕೆಳಗಿನಂತೆ ನಮೂದಿಸಲಾಗಿದೆ.

> "ಪರಿಷ್ಕೃತ ವೇತನ ಶ್ರೇಣಿಗಳ ಪ್ರಯೋಜನವನ್ನು ಅನುದಾನ ಪಡೆಯುವ ಶಿಕ್ಷಣ ಸಂಸ್ಥೆಗಳ ರಾಜ್ಯ ವೇತನ ಶ್ರೇಣಿಗಳಲ್ಲಿರುವ ನೌಕರರಿಗೆ ಹಾಗೂ ವಿಶ್ವವಿದ್ಯಾಲಯಗಳ ಬೋಧಕೇತರ ಸಿಬ್ಬಂದಿಗೆ ವಿಸ್ತರಿಸಲಾಗುವುದು. ಈ ಸಂಬಂಧದಲ್ಲಿ ಆದೇಶಗಳನ್ನು ಸಂಬಂಧಪಟ್ಟ ಸಂಸ್ಥೆಗಳ ಆಡಳಿತ ಇಲಾಖೆಗಳು ಪ್ರತ್ಯೇಕವಾಗಿ ಹೊರಡಿಸುತ್ತವೆ."

ಆ ಹಿನ್ನಲೆಯಲ್ಲಿ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಇಡಿ 21 ವಿವಿಧ 2007,
ಬೆಂಗಳೂರು, ದಿನಾಂಕ:29-06-2007

ರಾಜ್ಯ ಸರ್ಕಾರದ ವೇತನಾನುದಾನ ಪಡೆಯುವ ಎಲ್ಲಾ ಅನುದಾನಿತ ಶಿಕ್ಷಣ ಸಂಸ್ಥೆಗಳ ರಾಜ್ಯ ವೇತನ ಶ್ರೇಣಿಯಲ್ಲಿರುವ ನೌಕರರಿಗೆ ಮತ್ತು ರಾಜ್ಯ ವೇತನ ಶ್ರೇಣಿಗಳಲ್ಲಿರುವ ವಿಶ್ವವಿದ್ಯಾಲಯಗಳ ಬೋಧಕೇತರ ಸಿಬ್ಬಂದಿಗೆ ಅಧಿಸೂಚನೆ ಸಂಖ್ಯೆ:ಎಫ್‌ಡಿ 17 ಎಸ್‌ಆರ್‌ಪಿ 2007, ದಿನಾಂಕ:16-05-2007ರಲ್ಲಿ ಹೊರಡಿಸಿರುವ 2007ರ ಕರ್ನಾಟಕ ನಾಗರೀಕ ಸೇವಾ (ಪರಿಷ್ಕೃತ ವೇತನ) ನಿಯಮಗಳ ಹಾಗೂ ಸಂಬಂಧಿತ ಆದೇಶಗಳನ್ನು ವಿಸ್ತರಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಎಂ.ಎಂ.ಹಿರೇಮಠ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ.

**ಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು (ಇದನ್ನು ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಿ 2000 ಪ್ರತಿಗಳನ್ನು ಶಿಕ್ಷಣ ಇಲಾಖೆಗೆ ಒದಗಿಸುವಂತೆ ಕೋರುತ್ತಾ)

**<u>ಪ್ರತಿ ಇವರಿಗೆ:-</u>**

1. ಮಹಾಲೇಖಪಾಲರು, ಕರ್ನಾಟಕ ಎ&ಇ, ಲೆಕ್ಕಪರಿಶೋಧನೆ-1, ಲೆಕ್ಕಪರಿಶೋಧನೆ-2, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು/ ಧಾರವಾಡ/ಗುಲ್ಬರ್ಗಾ.
3. ಆಯುಕ್ತರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
4. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಕುಲಸಚಿವರು, ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು.
7. ಅಪರ/ಸಹ/ಉಪ/ಅಧೀನ ಕಾರ್ಯದರ್ಶಿಗಳು/ಶಾಖಾಧಿಕಾರಿಗಳು, ಶಿಕ್ಷಣ ಇಲಾಖೆ.
8. ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ಸೇವೆಗಳು-2).
9. ಶಾಖಾ ರಕ್ಷಾ ಕಡತ.
10. ಹೆಚ್ಚುವರಿ ಪ್ರತಿ-10 .